# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 15-10-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಉಮೇಶ್, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀಮತಿ ಶಾಂತ.ಬಿ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
3. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
4. ಮಾಧವಿ, ವೈದ್ಯಾಧಿಕಾರಿಯವರ ಕಛೇರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಶ್ರೀಮತಿ ವಿನುತ, ಸದಸ್ಯರು,
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)
7. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)
8. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರವಿ, ಕಂದಾಯ ನಿರೀಕ್ಷಕರು,
2. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
3. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
4. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
5. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
6. ಸಂಗೀತಾ, ಸಹಾಯಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ
7. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,
8. ಶ್ರೀ ವಿಕ್ರಾಂತ್, ಸಹಾಯಕ ಅಭಿಯಂತರರು, ಬೃಹತ್ ನೀರುಗಾಲುವೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಘನತ್ಯಾಜ್ಯ ನಿರ್ವಹಣೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

2) **ಬೀದಿ ದೀಪಗಳ ನಿರ್ವಹಣೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

3) **ಬೃಹತ್ ನೀರುಗಾಲುವೆ:-**

- **ಶ್ರೀಮತಿ ವಿನುತ, ಸದಸ್ಯರು ರವರು ಮಾತನಾಡಿ:-** ರಾಜಕಾಲುವೆಯಲ್ಲಿ ಅಲ್ಲಲ್ಲಿ ಮಣ್ಣು ತುಂಬಿದ್ದು, ಮಳೆ ನೀರು ಸರಾಗವಾಗಿ ಹರಿಯಲು ಡಿ-ಸಿಲ್ಟ್ ಮಾಡಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಬೃಹತ್ ನೀರುಗಾಲುವೆ ವಿಭಾಗದ ಅಭಿಯಂತರರು ಡಿ ಸಿಲ್ಟ್ ಮಾಡಲು ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಡಿ ಸಿಲ್ಟಿಂಗ್ ಕಾಮಗಾರಿಯನ್ನು ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು ಮತ್ತು

ರಾಜಕಾಲುವೆ ಮೇಲೆ ಅಲ್ಲಲ್ಲಿ ಮುರಿದಿರುವ ಫೆನ್ಸಿಂಗ್ ಅನ್ನು ಸರಿಪಡಿಸಲಾಗುವುದೆಂದು ಸಭೆಗೆ ತಿಳಿಸಿದರು.

4) **ಆರೋಗ್ಯ ಇಲಾಖೆ:–**

- ಆರೋಗ್ಯ ವೈದ್ಯಾಧಿಕಾರಿಗಳ ಕಛೇರಿ ಸಿಬ್ಬಂದಿಯವರು ಮಾತನಾಡಿ ಎಲ್ಲಾ ಕೋವಿಡ್ ಸಂಬಂಧಿಸಿದ ಎಲ್ಲಾ ಪರೀಕ್ಷೆಗಳನ್ನು ನಿರಂತರವಾಗಿ ಮಾಡಲಾಗುತ್ತಿದ್ದು, ವ್ಯಾಕ್ಸಿನೇಷನ್, ಬೂಸ್ಟರ್ ವ್ಯಾಕ್ಸಿನೇಷನ್ ಮಾಡಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

5) **ಕಾಮಗಾರಿ ಇಲಾಖೆ:–**

- **ಶ್ರೀ ಪ್ರಸನ್ನ, ಸದಸ್ಯರು ರವರು ಮಾತನಾಡಿ,** ಹೆಚ್.ಬಿ.ಆರ್ ಬಡಾವಣೆಯಲ್ಲಿ 2ನೇ ಅಡ್ಡರಸ್ತೆಯಲ್ಲಿ ಸಿ.ಸಿ.ಕ್ಯಾಮೆರಾ ದುರಸ್ತಿಯಾಗಿದ್ದು, ಅದನ್ನು ಕೂಡಲೇ ಸರಿಪಡಿಸಲು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಚರ್ಚಿಸಿ, ಕೂಡಲೇ ಸಂಬಂಧಪಟ್ಟವರಿಂದ ದುರಸ್ತಿಪಡಿಸಿಕೊಡಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

6) **ಕಂದಾಯ ಇಲಾಖೆ:–** ಯಾವುದೇ ಸಮಸ್ಯೆ ಇರುವುದಿಲ್ಲ.

7) **ಉದ್ಯಾನವನಗಳ ವಿಭಾಗ:–**

- **ಶ್ರೀಮತಿ ವಿನುತ, ಸದಸ್ಯರು, ರವರು ಮಾತನಾಡಿ,** ವಾರ್ಡ್ ವ್ಯಾಪ್ತಿಯಲ್ಲಿರುವ ಪಾರ್ಕ್‌ಗಳಲ್ಲಿ ಸಾರ್ವಜನಿಕರಿಗೆ ಪ್ರವೇಶಕ್ಕೆ ಸಮಯವನ್ನು ನಿಗಧಿಪಡಿಸಿದ ನಾಮಫಲಕಗಳನ್ನು ಅಳವಡಿಸಲು ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಈವರೆವಿಗೂ ಸಮಯವನ್ನು ಸೂಚಿಸುವ ನಾಮಫಲಕಗಳನ್ನು ಅಳವಡಿಸಿರುವುದಿಲ್ಲವೆಂದು ಸಭೆಗೆ ಮತ್ತೊಮ್ಮೆ ತಿಳಿಸಿದಾಗ, ಈ ಬಗ್ಗೆ ಮುಂದಿನ ಸಭೆಯಲ್ಲಿ ಉದ್ಯಾನವನಗಳ ಅಧಿಕಾರಿಗಳ ಸಮ್ಮುಖದಲ್ಲಿ ಚರ್ಚಿಸಿ, ತೀರ್ಮಾನಿಸಲಾಗುವುದೆಂದು ಸಭೆಗೆ ತಿಳಿಸಿದರು.

8) **ಅರಣ್ಯ ವಿಭಾಗ:–** ಯಾವುದೇ ಸಮಸ್ಯೆ ಇರುವುದಿಲ್ಲ.

9) **ಪಶುಸಂಗೋಪನೆ ವಿಭಾಗ:–** ಯಾವುದೇ ಸಮಸ್ಯೆ ಇರುವುದಿಲ್ಲ.

10) **ನೀರು ಸರಬರಾಜು:–** ಯಾವುದೇ ಸಮಸ್ಯೆ ಇರುವುದಿಲ್ಲ.

11) **ಪೊಲೀಸ್/ಸಂಚಾರ ಮತ್ತು ಕಾನೂನು ಸುವ್ಯವಸ್ಥೆ:–**

12) **ಬೆಸ್ಕಾಂ ಇಲಾಖೆ :–** ಯಾವುದೇ ಸಮಸ್ಯೆ ಇರುವುದಿಲ್ಲ.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.